# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ: ಬೆಂಗಳೂರಿನಿಂದ ಕಾರವಾರಕ್ಕೆ ಹಾಗೂ ಕಾರವಾರದಿಂದ ಬೆಂಗಳೂರಿಗೆ ಗೋವಾ ಮೂಲಕ ವಿಮಾನ ಪ್ರಯಾಣ ಕೈಗೊಳ್ಳಲು ಅನುಮತಿ ನೀಡುವ ಬಗ್ಗೆ.**

**ಪ್ರಸ್ತಾವನೆ:**

ಕರ್ನಾಟಕ ನಾಗರೀಕ ಸೇವಾ ನಿಯಮಗಳ 462ನೇ ನಿಯಮದ ಟಿಪ್ಪಣಿ (14)ಕ್ಕೆ ತಿದ್ದುಪಡಿ ಮಾಡಿ, ವಿಮಾನದ ಮೂಲಕ ಪ್ರಯಾಣ ಮಾಡಲು ಹಕ್ಕು ಹೊಂದಿರುವ ಸರ್ಕಾರಿ ನೌಕರರು ಕರ್ತವ್ಯದ ಮೇಲೆ ಬೆಂಗಳೂರು ಮತ್ತು ಕಾರವಾರಗಳ ನಡುವೆ ಪ್ರಯಾಣ ಮಾಡುವಾಗ ವಿಮಾನದಲ್ಲಿ ಧಾರವಾಡದ ಮೂಲಕ ಪ್ರಯಾಣ ಮಾಡಬಹುದು ಮತ್ತು ರೈಲ್ವೆಯವರು ಬೆಂಗಳೂರು ಮತ್ತು ಹುಬ್ಬಳ್ಳಿ ಹಾಗೂ ಹುಬ್ಬಳ್ಳಿ ಮತ್ತು ಬೆಂಗಳೂರು ನಡುವೆ ಸಂಚರಿಸಲು ಕಲ್ಪಿಸಿರುವ "ಇಂಟರ್ ಸಿಟಿ ಎಕ್ಸ್‌ಪ್ರೆಸ್" ಸೇವೆಯನ್ನು ಸಹ ಸರ್ಕಾರಿ ನೌಕರರು ಉಪಯೋಗಿಸಿಕೊಳ್ಳುವ ಅವಕಾಶ ಕಲ್ಪಿಸಲಾಗಿತ್ತು.

ಆದರೆ, ಇತ್ತೀಚಿನ ದಿನಗಳಲ್ಲಿ ಬೆಂಗಳೂರಿನಿಂದ ಹುಬ್ಬಳ್ಳಿಗೆ ಹಾಗೂ ಹುಬ್ಬಳ್ಳಿಯಿಂದ ಬೆಂಗಳೂರಿಗೆ ವಿಮಾನಯಾನವು ಸ್ಥಗಿತಗೊಂಡಿರುತ್ತದೆ. ಈ ಹಿನ್ನೆಲೆಯಲ್ಲಿ, ಕ.ನಾ.ಸೇ.ನಿ.ನಿಯಮ 462ಕ್ಕೆ ತಿದ್ದುಪಡಿ ಮಾಡುವುದನ್ನು ಕಾಯ್ದಿರಿಸಿ, ವಿಮಾನದ ಮೂಲಕ ಪ್ರಯಾಣ ಮಾಡಲು ಹಕ್ಕು ಹೊಂದಿರುವ ಸರ್ಕಾರಿ ನೌಕರರು ಕರ್ತವ್ಯದ ಮೇಲೆ ಬೆಂಗಳೂರು ಮತ್ತು ಕಾರವಾರಗಳ ನಡುವೆ ಪ್ರಯಾಣ ಮಾಡುವಾಗ ವಿಮಾನದಲ್ಲಿ ಗೋವಾ ಮೂಲಕ ಪ್ರಯಾಣ ಮಾಡಲು ಅನುಮತಿ ನೀಡಲು ತೀರ್ಮಾನಿಸಲಾಗಿದೆ. ಅದರಂತೆ, ಈ ಕೆಳಗಿನ ಆದೇಶವನ್ನು ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂ: ಆಇ 10 ಸನಿತಿ 2012, ಬೆಂಗಳೂರು, ದಿನಾಂಕ:06.12.2012.**

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 462ಕ್ಕೆ ತಿದ್ದುಪಡಿ ಮಾಡುವುದನ್ನು ಕಾಯ್ದಿರಿಸಿ, ವಿಮಾನದ ಮೂಲಕ ಪ್ರಯಾಣ ಮಾಡಲು ಹಕ್ಕು ಹೊಂದಿರುವ ಸರ್ಕಾರಿ ನೌಕರರು ಕರ್ತವ್ಯದ ಮೇಲೆ ಬೆಂಗಳೂರು ಮತ್ತು ಕಾರವಾರಗಳ ನಡುವೆ ಪ್ರಯಾಣ ಮಾಡುವಾಗ ವಿಮಾನದಲ್ಲಿ ಹುಬ್ಬಳ್ಳಿ-ಧಾರವಾಡ ಮೂಲಕ ಪ್ರಯಾಣ ಮಾಡುವುದಕ್ಕೆ ಬದಲಾಗಿ, ಗೋವಾ ಮೂಲಕ ಪ್ರಯಾಣ ಮಾಡಲು ಸರ್ಕಾರವು ಅನುಮತಿಸಿದೆ.

....2/–

ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮಗಳಿಗೆ ಸೂಕ್ತ ತಿದ್ದುಪಡಿಯನ್ನು ಪ್ರತ್ಯೇಕವಾಗಿ ಹೊರಡಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ

ಮತ್ತು ಅವರ ಹೆಸರಿನಲ್ಲಿ,

Alice Gonsalves
06/12/12

(ಆಲಿಸ್ ಗೊನ್ಸಾಲ್ವಿಸ್)

ಸರ್ಕಾರದ ಅಧೀನ ಕಾರ್ಯದರ್ಶಿ,

ಆರ್ಥಿಕ ಇಲಾಖೆ (ಸೇವೆಗಳು-1).

ಇವರಿಗೆ:-

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು,[ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಪ್ರಕಟಿತ 500 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಸೇವೆಗಳು-1, ಕೊಠಡಿ ಸಂಖ್ಯೆ: 259, ಎರಡನೇ ಮಹಡಿ, ವಿಧಾನಸೌಧ, ಬೆಂಗಳೂರು, ಇವರಿಗೆ ಸರಬರಾಜು ಮಾಡಲು ಕೋರಲಾಗಿದೆ].

ಪ್ರತಿ:

1. ಮಹಾಲೇಖಪಾಲರು (ಎ ಮತ್ತು ಇ) (ಆಡಿಟ್-1/ಆಡಿಟ್-2), ಕರ್ನಾಟಕ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು.
3. ಅಪರ ಮುಖ್ಯ ಕಾರ್ಯದರ್ಶಿಗಳು.
4. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು.
5. ಅಪರ ಮುಖ್ಯ ಕಾರ್ಯದರ್ಶಿಗಳು (ಆರ್ಥಿಕ ಇಲಾಖೆ).
6. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು ಮತ್ತು ಕಾರ್ಯದರ್ಶಿಗಳು.
7. ಮಾನ್ಯ ಮುಖ್ಯಮಂತ್ರಿಯವರ ಕಾರ್ಯದರ್ಶಿಗಳು.
8. ಎಲ್ಲಾ ಇಲಾಖಾ ಮುಖ್ಯಸ್ಥರುಗಳು.
9. ಎಲ್ಲಾ ಜಿಲ್ಲಾಧಿಕಾರಿಗಳು.
10. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಕಾರ್ಯನಿರ್ವಾಹಣಾಧಿಕಾರಿಗಳು.
11. ಕಾರ್ಯದರ್ಶಿ, ಕರ್ನಾಟಕ ವಿಧಾನಸಭೆ/ವಿಧಾನ ಪರಿಷತ್ತು, ಬೆಂಗಳೂರು.

....3/-

12.ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚನ್ಯಾಯಾಲಯ, ಬೆಂಗಳೂ

13.ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು

14.ರಿಜಿಸ್ಟ್ರಾರ್, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

15.ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಬಿ.ಡಿ.ಎ ಕಾಂಪ್ಲೆ ಬೆಂಗಳೂರು.

16.ಸರ್ಕಾರದ ಎಲ್ಲಾ ಅಪರ ಕಾರ್ಯದರ್ಶಿಗಳು/ ಜಂಟಿ ಕಾರ್ಯದರ್ಶಿಗ ಕಾರ್ಯದರ್ಶಿಗಳು.

17. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ಐ.ಆರ್.ಎಲ್.ಎ), (ಲೆಕ್ಕ, ಸಿಆಸುಇ (ಸೇವೆಗಳು-1, ಸೇವೆಗಳು- 2, ಸೇವೆಗಳು-3 ಮತ್ತು ಸೇವೆಗಳು-ಸುಧಾರಣೆ) ಸಿಆಸುಇ (ರಾಜ್ಯ ಶಿಷ್ಟಾಚಾರ).

18. ವಾರದ ಗೆಜೆಟ್/ಸೆಕ್ಷನ್ ಗಾರ್ಡ್ ಫೈಲ್ /ಬಿಡಿಪ್ರತಿಗಳು.

**ಕರ್ನಾಟಕ ಸರ್ಕಾರದ ಅಧಿಕೃತ ಅಂತರ್ಜಾಲ ತಾಣ www.finance.kar.nic.in ವೀಕ್ಷಿ**